ವಿಳಾಸ: UNIREG
ದೂರವಾಣಿ ಸಂಖ್ಯೆ: 2419440/2419361
ಫ್ಯಾಕ್ಸ್ ಸಂಖ್ಯೆ: 0821– 2419363/2419301

ಇಮೇಲ್: registrar@uni-mysore.ac.in
ವೆಬ್ ಸೈಟ್: www.uni-mysore.ac.in

# ಮೈಸೂರು ವಿಶ್ವವಿದ್ಯಾನಿಲಯ

ಸ್ಥಾಪನೆ 1916

ವಿಶ್ವವಿದ್ಯಾನಿಲಯ ಕಾರ್ಯಸೌಧ,
ಕ್ರಾಫರ್ಡ್‌ಭವನ, ಮೈಸೂರು–570 005.

ವಿಷಯ: 2021–22ನೇ ಶೈಕ್ಷಣಿಕ ಸಾಲಿಗೆ ಅತಿಥಿ ಉಪನ್ಯಾಸಕರನ್ನು ಆಹ್ವಾನಿಸುವ ಬಗ್ಗೆ.

ಉಲ್ಲೇಖ: 1. ದಿನಾಂಕ 28.06.2019ರ ಸಿಂಡಿಕೇಟ್ ಸಭೆಯ ತೀರ್ಮಾನ.
2. ವಿಶ್ವವಿದ್ಯಾನಿಲಯದ ಅಧಿಸೂಚನೆ ಸಂಖ್ಯೆ ಇಟಿ.11/28/2019–20 ದಿನಾಂಕ.16.08.2019.
3. ವಿ.ವಿ.ಆದೇಶ ಸಂಖ್ಯೆ: ಇಟಿ13/202/2017–18 ದಿನಾಂಕ 03.03.2021
4. ವಿ.ವಿ.ಆದೇಶ ಸಂಖ್ಯೆ: ಇಟಿ13/202/2017–18 ದಿನಾಂಕ 01.12.2021
5. ಅಧ್ಯಕ್ಷರು, ಆಹಾರ ವಿಜ್ಞಾನ ಮತ್ತು ಪೋಷಣೆ, ಮಾ.ಗಂ. ಮೈಸೂರು, ಇವರ ಪತ್ರ ಸಂಖ್ಯೆ: ಎಫ್‌ಎಸ್‌ಎನ್/521/2021–22 ದಿನಾಂಕ 28.03.2022
6. ಮಾನ್ಯ ಕುಲಪತಿಗಳ ಆದೇಶ ದಿನಾಂಕ: 18.04.2022

** * **

## ಆದೇಶ ಸಂಖ್ಯೆ: ಇಟಿ13/202/2017–18 ದಿನಾಂಕ 26ನೇ ಏಪ್ರಿಲ್ 2022(1).

ಮಾನ್ಯ ಕುಲಪತಿಯವರ ಅನುಮೋದನೆಯ ಮೇರೆಗೆ, 2021–22ನೇ ಶೈಕ್ಷಣಿಕ ಸಾಲಿನಲ್ಲಿ ಮೈಸೂರು ವಿಶ್ವವಿದ್ಯಾನಿಲಯದ ಸ್ನಾತಕ/ಸ್ನಾತಕೋತ್ತರ ಅಧ್ಯಯನ ವಿಭಾಗಗಳಲ್ಲಿ ವಿದ್ಯಾರ್ಥಿಗಳಿಗೆ ಹೆಚ್ಚುವರಿ ಬೋಧನಾ ಕಾರ್ಯ ನಿರ್ವಹಿಸಲು ಈ ಕೆಳಕಂಡ ಅತಿಥಿ ಉಪನ್ಯಾಸಕರನ್ನು ಅವರ ಹೆಸರಿನ ಮುಂದೆ ನಮೂದಿಸಲಾದ ದಿನಾಂಕದಿಂದ ಜಾರಿಗೆ ಬಂದಂತೆ ಆಹ್ವಾನಿಸಲಾಗಿದೆ.

| ಕ್ರಮ ಸಂಖ್ಯೆ | ಅತಿಥಿ ಉಪನ್ಯಾಸಕರ ಹೆಸರು | ವಿಷಯ | ಈ ಹಿಂದೆ ವಹಿಸಿರುವ ಕಾರ್ಯಭಾರ* | ಈ ಹಿಂದೆ ವಹಿಸಿರುವ ಕಾರ್ಯಭಾರದ ಸಂಭಾವನೆ | ಪರಿಷ್ಕರಿಸಿರುವ ಒಟ್ಟು ಕಾರ್ಯಭಾರ | ಪರಿಷ್ಕರಿಸಿರುವ ಒಟ್ಟು ಕಾರ್ಯಭಾರದ ಸಂಭಾವನೆ | ಷರಾ |
|---|---|---|---|---|---|---|---|
| 01 | Dr.Usha N.S DOS in Food Science & Nutrition, MGM. | Food Science & Nutrition | 08 | 18,500/- | 08+04 | ಮಾಹೆಯಾನ 08 ಗಂಟೆಗಳ ಬೋಧನಾ ಕಾರ್ಯಕ್ಕೆ ರೂ.18,500/– ಹಾಗೂ ಹೆಚ್ಚುವರಿ 04 ಗಂಟೆಗಳ ಬೋಧನಾ ಕಾರ್ಯಕ್ಕೆ ಒಂದು ಗಂಟೆಗೆ ರೂ. 300/–ಗಳಂತೆ. | ದಿನಾಂಕ 02.02.2022ರಿಂದ ಜಾರಿಗೆ ಬಂದಂತೆ |
| 02 | Mrs. Seema Siddiqui, DOS in Food Science & Nutrition, MGM. | | 08 | 18,500/- | 08+04 | | ದಿನಾಂಕ 18.10.2021ರಿಂದ ಜಾರಿಗೆ ಬಂದಂತೆ |

* ಬೋಧನಾ ವಿಷಯ, ಥಿಯರಿ/ಪ್ರಾಕ್ಟಿಕಲ್ ಕಾರ್ಯದ ಬಗ್ಗೆ ಸಂಬಂಧಿಸಿದ ವಿಭಾಗದ ಅಧ್ಯಕ್ಷರು ಹಂಚಿಕೆ ಮಾಡುವರು. ಎರಡು ಪ್ರಾಯೋಗಿಕ ಬೋಧನಾ ಕಾರ್ಯವು ಒಂದು ಥಿಯರಿ ಬೋಧನಾ ಕಾರ್ಯಕ್ಕೆ ಸಮಾನವಾಗಿರುತ್ತದೆ.

ಈ ವೆಚ್ಚವನ್ನು ಆಯವ್ಯಯ ಅಂದಾಜುಗಳ "ವೇತನ ಮತ್ತು ಭತ್ಯೆಗಳು" ಖಾತೆಯ "ತಾತ್ಕಾಲಿಕ ಅಧ್ಯಾಪಕರ ವೇತನ" (ಕೋಡ್ 228) ಶೀರ್ಷಿಕೆಯಿಂದ ಭರಿಸಬಹುದಾಗಿದೆ.

ಷರತ್ತುಗಳು:

ಅ. ಪ್ರತಿ ವಾರದಲ್ಲಿ 12 ಗಂಟೆಗಳ ಬೋಧನಾ ಕಾರ್ಯನಿರ್ವಹಿಸಲು ಆಹ್ವಾನಿತವಾಗಿರುವ ಅತಿಥಿ ಉಪನ್ಯಾಸಕರು ಪ್ರತಿದಿನ ಅಧ್ಯಯನ ವಿಭಾಗದ ಕೆಲಸದ ಪೂರ್ಣಾವಧಿಯಲ್ಲಿ ಕಡ್ಡಾಯವಾಗಿ ಉಪಸ್ಥಿತರಿದ್ದು, ವಿದ್ಯಾರ್ಥಿಗಳ

Kumud

ಮು.ತಿ.ನೋ

ಮಾರ್ಗದರ್ಶನಕ್ಕೆ ಲಭ್ಯವಿರಬೇಕು ಹಾಗೂ ಸರ್ಕಾರದ ಸುತ್ತೋಲೆ ಸಂಖ್ಯೆ ಕಾಶಿಇ/44/ಆಉನೇ/2012-13ನೇ ಪಾವಿ-1, ದಿನಾಂಕ 02.7.2013ರ ಪ್ರಕಾರ ಕಾರ್ಯ ನಿರ್ವಹಿಸಬೇಕಾಗಿರುತ್ತದೆ.

ಆ. ಅತಿಥಿ ಉಪನ್ಯಾಸಕರು ಪ್ರತಿ ಮಾಹೆಯಲ್ಲಿ ಒಂದು ದಿನ ಸಾಂದರ್ಭಿಕ ರಜೆಯನ್ನು ಮಾತ್ರ ಪಡೆಯಲು ಅರ್ಹರಿರುತ್ತಾರೆ ಮತ್ತು ಈ ರಜೆ ಅವಧಿಯ ಬೋಧನಾ ಕಾರ್ಯಭಾರವನ್ನು ಮುಂದಿನ ಮಾಹೆಯೊಳಗೆ ಸರಿದೂಗಿಸುವುದು.

ಇ. ಹಂಚಿಕೆಯಾಗಿರುವ ಬೋಧನಾ ತರಗತಿಗಳನ್ನು ತೆಗೆದುಕೊಳ್ಳಲು ವಿಫಲರಾದಲ್ಲಿ, ಗೈರುಹಾರಾದ ದಿನದ ಸಂಭಾವನೆಯನ್ನು ಕಡಿತಗೊಳಿಸಲಾಗುವುದು.

ಈ. ಮೈಸೂರು ವಿಶ್ವವಿದ್ಯಾನಿಲಯದಲ್ಲಿ 2021-22ನೇ ಶೈಕ್ಷಣಿಕ ವರ್ಷದಲ್ಲಿ 12 ಗಂಟೆಗಳ ಕಾರ್ಯಭಾರ ನಿರ್ವಹಿಸುವ ಅತಿಥಿ ಉಪನ್ಯಸಾಕರುಗಳು ಬೇರೆ ಸರ್ಕಾರಿ ಕಾಲೇಜು ಅಥವಾ ಖಾಸಗಿ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸಬಾರದು.

ಆಹ್ವಾನಿತ ಅತಿಥಿ ಉಪನ್ಯಾಸಕರು ಕೆಲಸಕ್ಕೆ ವರದಿ ಮಾಡಿಕೊಳ್ಳುವಾಗ ಈ ಕೆಳಕಂಡಂತೆ ಮುಚ್ಚಳಿಕೆಯನ್ನು ನೀಡತಕ್ಕದ್ದು.

ಮುಚ್ಚಳಿಕೆ

1. ಈ ಮೂಲಕ ಪ್ರಮಾಣೀಕರಿಸುವುದೇನೆಂದರೆ, ವಿಶ್ವವಿದ್ಯಾನಿಲಯವು 2021-22ನೇ ಶೈಕ್ಷಣಿಕ ವರ್ಷಕ್ಕೆ ಅಥವಾ ಮುಂದಿನ ಆದೇಶದವರೆಗೆ, ಯಾವುದು ಮೊದಲು ಘಟಿಸುವುದೋ ಅಲ್ಲಿಯವರೆಗೆ ಹೆಚ್ಚುವರಿ ಬೋಧನಾ ಕಾರ್ಯವನ್ನು ನಿರ್ವಹಿಸಲು ನನ್ನನ್ನು ಆಹ್ವಾನಿಸಿರುವುದು ತಾತ್ಕಾಲಿಕವಾಗಿರುತ್ತದೆ ಎಂದು ತಿಳಿದಿರುತ್ತೇನೆ. ಜೊತೆಗೆ ಕಾರಣಾಂತರಗಳಿಂದ ಹೆಚ್ಚುವರಿ ಭೋಧನಾ ಕಾರ್ಯದಲ್ಲಿ ಕೊರತೆಯುಂಟಾದಲ್ಲಿ ವಿಶ್ವವಿದ್ಯಾನಿಲಯವು ಯಾವುದೇ ಮುನ್ಸೂಚನೆ ಇಲ್ಲದಂತೆ ಹಾಗೂ ಯಾವುದೇ ಕಾರಣ ನೀಡದೆ ನನಗೆ ನೀಡಿರುವ ಅತಿಥಿ ಉಪನ್ಯಾಸಕರ ಆಹ್ವಾನವನ್ನು ಹಿಂಪಡೆಯಬಹುದಾಗಿದೆ.
2. ನಾನು ಕರ್ನಾಟಕ ಸರ್ಕಾರದ ಸುತ್ತೋಲೆ ಸಂಖ್ಯೆ ಕಾಶಿಇ/44/ಆಉನೇ/2012-13ನೇ ಪಾವಿ-1 ದಿನಾಂಕ 02.7.2013ರಲ್ಲಿ ಸೂಚಿಸಿರುವಂತೆ, ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಅತಿಥಿ ಉಪನ್ಯಾಸಕನಾಗಿ ಕೆಲಸ ನಿರ್ವಹಿಸುತ್ತಿರುವಾಗ ಯಾವುದೇ ಸರ್ಕಾರಿ/ವಿಶ್ವವಿದ್ಯಾನಿಲಯದ ಸಂಯೋಜಿತ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕನಾಗಿ ಕರ್ತವ್ಯ ನಿರ್ವಹಿಸುವುದಿಲ್ಲ ಎಂದು ಈ ಮೂಲಕ ಪ್ರಮಾಣೀಕರಿಸುತ್ತೇನೆ ಹಾಗೂ ಹಾಗೇನಾದರೂ ಕೆಲಸ ನಿರ್ವಹಿಸುವುದು ಕಂಡು ಬಂದಲ್ಲಿ, ಈ ನೇಮಕಾತಿಯನ್ನು ಯಾವುದೇ ಸೂಚನೆ ನೀಡದೇ ರದ್ದುಪಡಿಸಲಾಗುವುದೆಂದು ತಿಳಿದಿರುತ್ತೇನೆ.

ಮೇಲಿನ ಎಲ್ಲಾ ಷರತ್ತುಗಳಿಗೆ ಬದ್ಧರಾಗಿ ತಾವು ನೀಡಿರುವ ಅತಿಥಿ ಉಪನ್ಯಾಸಕರ ಆಹ್ವಾನವನ್ನು ಒಪ್ಪಿಕೊಂಡಿರುತ್ತೇನೆ.

ಆದೇಶದ ಮೇರೆಗೆ,

ಕುಲಸಚಿವ

ಕುಲಸಚಿವರು
ಮೈಸೂರು ವಿಶ್ವವಿದ್ಯಾನಿಲಯ
ಮೈಸೂರು

ಇವರಿಗೆ:

1. ಸಂಬಂಧಪಟ್ಟ ಅತಿಥಿ ಉಪನ್ಯಾಸಕರಿಗೆ -ಅಧ್ಯಕ್ಷರು, ಆಹಾರ ವಿಜ್ಞಾನ ಮತ್ತು ಪೋಷಣೆ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು, ಇವರ ಮುಖಾಂತರ.
2. ಅಧ್ಯಕ್ಷರು, ಆಹಾರ ವಿಜ್ಞಾನ ಮತ್ತು ಪೋಷಣೆ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು-ಅತಿಥಿ ಉಪನ್ಯಾಸಕರಿಂದ ಮೇಲೆ ತಿಳಿಸಿರುವ ಮುಚ್ಚಳಿಕೆಯನ್ನು ಕಡ್ಡಾಯವಾಗಿ ಬರೆಸಿಕೊಂಡು ನಂತರ ಕೆಲಸಕ್ಕೆ ವರದಿ ಮಾಡಿಸಿಕೊಳ್ಳುವುದು.
3. ಕುಲಸಚಿವರು (ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
4. ಹಣಕಾಸು ಅಧಿಕಾರಿಯವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
5. ಆಡಳಿತಾಧಿಕಾರಿಗಳು, ಆಡಳಿತಾಧಿಕಾರಿಗಳ ಕಛೇರಿ, ಮಾನಸಗಂಗೋತ್ರಿ, ಮೈಸೂರು.